# 23,24ರಂದು ಅಂತರ ಕಾಲೇಜು ಕಬಡ್ಡಿ ಚಾಂಪಿಯನ್‌ಶಿಪ್

**ಕಾರ್ಕಳ:** ಸ್ಥಳೀಯ ಮಂಜುನಾಥ ಪೈ ಸ್ಮಾರಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಮಂಗಳೂರು ವಿಶ್ವವಿದ್ಯಾನಿಲಯದ ಸಂಯುಕ್ತ ಆಶ್ರಯದಲ್ಲಿ ಅಂತರ ಕಾಲೇಜು ಮಹಿಳೆಯರ ಕಬಡ್ಡಿ ಚಾಂಪಿಯನ್‌ಶಿಪ್ 23 ಹಾಗೂ 24ರಂದು ಪೆರ್ವಾಜೆ ಶ್ರೀ ನಾರಾಯಣಗುರು ಸಭಾಭವನದಲ್ಲಿ ನಡೆಯಲಿದೆ. 23ರಂದು ಶಾಸಕ ವಿ.ಸುನಿಲ್ ಕುಮಾರ್ ಉದ್ಘಾಟಿಸಲಿದ್ದು, ಮುಖ್ಯ ಅತಿಥಿಗಳಾಗಿ ಉದ್ಯಮಿ ಡಿ.ಆರ್.ರಾಜು, ಅಂತಾರಾಷ್ಟ್ರೀಯ ಕ್ರೀಡಾಪಟು ರೋಹಿತ್ ಕುಮಾರ್ ಕಟೀಲ್, ಮಂಗಳೂರು ವಿ.ವಿ. ಕ್ರೀಡಾ ವಿಭಾಗದ ನಿರ್ದೇಶಕ ಡಾ.ಕಿಶೋರ್ ಕುಮಾರ್ ಸಿ.ಕೆ. ಉಪಸ್ಥಿತರಿರುವರು. ಮಂಗಳೂರು ವಿ.ವಿ.ವ್ಯಾಪ್ತಿಯ 35 ಕಾಲೇಜುಗಳ 350ಕ್ಕೂ ಅಧಿಕ ಮಹಿಳಾ ಕ್ರೀಡಾಪಟುಗಳು ಭಾಗವಹಿಸುವರು ಎಂದು ಪ್ರಾಂಶುಪಾಲ ಪ್ರೊ.ಶ್ರೀವರ್ಮ ಅಜ್ರಿ ಎಂ. ತಿಳಿಸಿದ್ದಾರೆ. 24ರಂದು ನಡೆಯುವ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಗೇರುಬೀಜ ಉದ್ಯಮಿ ಬೋಳ ಪ್ರಭಾಕರ ಕಾಮತ್, ಸಿಡಿಸಿ ಸದಸ್ಯ ಪ್ರಭಾಕರ ಬಂಗೇರ, ಎಪಿಎಂಸಿ ಮಾಜಿ ಅಧ್ಯಕ್ಷ ಅತ್ತೂರು ಬಾಲಕೃಷ್ಣ ಹೆಗ್ಡೆ, ಅಂತಾರಾಷ್ಟ್ರೀಯ ಕ್ರೀಡಾಪಟು ಅಪ್ಸರಾ ಕಟೀಲ್, ಮಂಗಳೂರು ವಿ.ವಿ. ಕ್ರೀಡಾ ವಿಭಾಗದ ನಿರ್ದೇಶಕ ಡಾ.ಕಿಶೋರ್ ಕುಮಾರ್ ಸಿ.ಕೆ. ಭಾಗವಹಿಸುವರು.